ಹಂಪೆಯಲ್ಲಿ ಸ್ಥಾಪಿಸಂವ ಕನ್ನಡ ವಿಶ್ವವಿದ್ಯಾಲಯ

೯೨. ಶ್ರೀ ಎಲ್. ಆರ್. ಶಿವರಾಮೇಗೌಡ (ನಾಗಮಂಗಲ).— ಮಾನ್ಯ ಶಿಕ್ಷಣ, ಯುವಜನ ವ್ಯವಹಾರಗಳು, ಕ್ರೀಡೆಗಳು, ಕನ್ನಡ ಹಾಗೂ ಸಂಸ್ಕೃತಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಹಂಪೆಯಲ್ಲಿ ಸ್ಥಾಪಿಸಲು ಉದ್ದೇಶಿಸಿರುವ ಕನ್ನಡ ವಿಶ್ವವಿದ್ಯಾಲಯವು ಯಾವಾಗ ಕಾರ್ಯರಂಭ ಮಾಡುವುದು ?

ಆ) ಈ ವಿಶ್ವವಿದ್ಯಾಲಯ ಸ್ಥಾಪನೆಗಾಗಿ ಸರ್ಕಾರವು ಈವರೆಗೆ ಕೈಗೊಂಡಿರುವ ಕ್ರಮಗಳೇನು ?

ಶ್ರೀ ಕೆ. ಹೆಚ್. ರಂಗನಾಥ್ (ಶಿಕ್ಷಣ, ಯುವಜನ ವ್ಯವಹಾರಗಳ ಮಂತ್ರಿಗಳು).—

ಅ) ೧೯೯೦–೯೧ನೇ ಸಾಲಿನಲ್ಲಿ ಕಾರ್ಯರಂಭ ಮಾಡಲು ಉದ್ದೇಶಿಸಲಾಗಿದೆ.

ಆ) ಹಂಪೆಯಲ್ಲಿ ಕನ್ನಡ ವಿಶ್ವವಿದ್ಯಾಲಯ ಸ್ಥಾಪಿಸಲು ಕರ್ನಾಟಕ ವಿಶ್ವವಿದ್ಯಾಲಯದ ಮಾಜಿ ಕುಲಸಚಿವರಾದ ಶ್ರೀ ಸದಾಶಿವ ಒಡೆಯರ್‌ರವರ ನೇತೃತ್ವದಲ್ಲಿ ವಿಕಸದಸ್ಯ ಆಯೋಗವನ್ನು ರಚಿಸಲಾಯಿತು. ಅವರು ವರದಿಯನ್ನು ಸಲ್ಲಿಸಿರುತ್ತಾರೆ ಈ ವರದಿಯನ್ನು ಸರ್ಕಾರ ಪರಿಶೀಲಿಸಿದೆ. ಹಂಪೆಯಲ್ಲಿ ಕನ್ನಡ ವಿಶ್ವವಿದ್ಯಾಲಯವನ್ನು ಸ್ಥಾಪಿಸಲು ಸರ್ಕಾರವು ತೀರ್ಮಾನ ಕೈಗೊಂಡಿದೆ. ೧೯೯೦–೯೧ನೇ ಸಾಲಿನ ಆಯವ್ಯಯದಲ್ಲಿ ರೂ. ೧.೦೦ ಕೋಟಿ ಹಣವನ್ನು ಒದಗಿಸಲಾಗಿದೆ.

ಕೃಷಿ ವಿಶ್ವವಿದ್ಯಾಲಯಗಳಲ್ಲಿ ಪ್ರವೇಶಾವಕಾಶಗಳ ಬಗ್ಗೆ

೧೭೩. ಶ್ರೀ ಎಲ್. ಆರ್. ಶಿವರಾಮೇಗೌಡ (ನಾಗಮಂಗಲ).—ಮಾನ್ಯ ವ್ಯವಸಾಯ ಮತ್ತು ತೋಟಗಾರಿಕೆ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದ ಕೃಷಿ ವಿಶ್ವವಿದ್ಯಾಲಯಗಳ ವಿವಿಧ ಅಧ್ಯಯನ ವಿಭಾಗಗಳಲ್ಲಿ ಸ್ನಾತಕೋತ್ತರ ವಿಭಾಗಗಳಲ್ಲಿರುವ ವಿದ್ಯಾರ್ಥಿಗಳ ಪ್ರವೇಶ ಅವಕಾಶಗಳ ಸಂಖ್ಯೆ ಎಷ್ಟು,

ಆ) ಮೇಲ್ಕಂಡ ವಿಶ್ವವಿದ್ಯಾಲಯಲ್ಲಿ ರಾಜ್ಯದ ಕೃಷಿಕರ ಹಾಗೂ ಗ್ರಾಮೀಣ ಕುಟುಂಬದಿಂದ ಬಂದ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ಮೀಸಲಾತಿಯ ಪ್ರಮಾಣವೆಷ್ಟು,

ಇ) ಮೇಲ್ಕಂಡ ವಿಶ್ವವಿದ್ಯಾಲಯಗಳ ಎಲ್ಲ ಸ್ಥಾನಗಳನ್ನು ರೈತರ ಮಕ್ಕಳಿಗೆ ದೊರಕುವಂತೆ ಸರ್ಕಾರವು ಶೇಕಡಾ ೧೦೦ರಷ್ಟು ಮೀಸಲಾತಿಯನ್ನು ೧೯೯೦–೯೧ರ ಶೈಕ್ಷಣಿಕ ವರ್ಷದಿಂದ ಜಾರಿಗೊಳಿಸಲು ಕ್ರಮಕೈಗೊಳ್ಳುವರೆ,

ಶ್ರೀ ಎಸ್. ಬಂಗಾರಪ್ಪ (ಕೃಷಿ ಮತ್ತು ತೋಟಗಾರಿಕೆ ಸಚಿವರು).—

ಅ) ೧೯೮೯–೯೦ನೇ ಸಾಲಿನಲ್ಲಿ ಸ್ನಾತಕೋತ್ತರ ವಿಭಾಗದಲ್ಲಿ ಈ ಕೆಳಕಂಡಂತೆ ಪ್ರವೇಶವನು ನೀಡಲಾಗಿದೆ.

ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ	—	೩೮೪
ಧಾರವಾಡ ಕೃಷಿ ವಿಶ್ವವಿದ್ಯಾನಿಲಯ	—	೧೪೪

ಆ) ರಾಜ್ಯದ ಕೃಷಿಕರ ಮತ್ತು ಗ್ರಾಮೀಣ ಕುಟುಂಬದಿಂದ ಬಂದ ವಿದ್ಯಾರ್ಥಿಗಳಿಗೆ ಪದವಿ ತರಗತಿಗಳ ಪ್ರವೇಶದಲ್ಲಿ ಶೇಕಡ ೧೫ರಷ್ಟು ಮೀಸಲಾತಿಯನ್ನು ಕಲ್ಪಿಸಲಾಗಿದೆ.

ಇ) ಈ ಪ್ರಸ್ತಾಪನೆಯು ಸರ್ಕಾರದ ಮುಂದೆ ಇಲ್ಲ.

ಐ.ಟಿ.ಐ. ನೋಟಿಫೈಡ್ ಏರಿಯಾದ ಸ್ಟಾಂಪ್

೬೨. ಶ್ರೀ ಎ. ಕೃಷ್ಣಪ್ಪ (ವರ್ತೂರು) —ಮಾನ್ಯ ಬಂದರು ಹಾಗೂ ಮೀನುಗಾರಿಕೆ, ವಸತಿ ಹಾಗೂ ನಗರಾಭಿವೃದ್ಧಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೆಂಗಳೂರು ನಗರಕ್ಕೆ ಸೇರಿರುವ ಐಟಿಐ ನೋಟಿಫೈಡ್ ಏರಿಯಾ ಕಛೇರಿಯವರು ಸರ್ಕಾರಕ್ಕೆ ಸ್ಟಾಂಪ್ ಶುಲ್ಕವನ್ನು ಪಾವತಿ ಮಾಡುತ್ತಿರುವರೆ ?